# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 525
2. ಸದಸ್ಯರ ಹೆಸರು : ಶ್ರೀ ಅಲ್ಲಂ ವೀರಭದ್ರಪ್ಪ
3. ಉತ್ತರಿಸಬೇಕಾದ ದಿನಾಂಕ : 16-09-2021

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
| --- | --- | --- |
| ಅ. | ಮೇಕೆದಾಟು ಕುಡಿಯುವ ನೀರಿನ ಯೋಜನೆ ಮತ್ತು ಆಲಮಟ್ಟಿ ಅಣೆಕಟ್ಟೆಯ ಗೇಟನ್ನು ಎತ್ತರಿಸುವ ಯೋಜನೆ ಸರ್ಕಾರದ ಮುಂದಿದೆಯೇ; | ಹೌದು. ಮೇಕೆದಾಟು ಸಮತೋಲನ ಜಲಾಶಯ ಹಾಗೂ ಕುಡಿಯುವ ನೀರಿನ ಯೋಜನೆ ಮತ್ತು ಆಲಮಟ್ಟಿ ಅಣೆಕಟ್ಟೆಯ ಗೇಟನ್ನು ಎತ್ತರಿಸುವ ಯೋಜನೆಯನ್ನು ಕೈಗೆತ್ತಿಕೊಳ್ಳಲು ಯೋಜಿಸಲಾಗಿದ್ದು, ವಿವರ ಕೆಳಕಂಡಂತಿದೆ : |
| ಆ. | ಹಾಗಿದ್ದಲ್ಲಿ, ಈ ವಿಚಾರದಲ್ಲಿ ಆಗಿರುವ ಪ್ರಗತಿ ಏನು; ಯಾವಾಗ ಯೋಜನೆಯನ್ನು ಪ್ರಾರಂಭಿಸಲಾಗುವುದು? | **1. <u>ಮೇಕೆದಾಟು ಯೋಜನೆ</u> :-**<br>ಮೇಕೆದಾಟು ಸಮತೋಲನ ಜಲಾಶಯ ಹಾಗೂ ಕುಡಿಯುವ ನೀರಿನ ಯೋಜನೆಯನ್ನು ಕಾವೇರಿ ನದಿಗೆ ಅಡ್ಡಲಾಗಿ ಅರ್ಕಾವತಿ ಹಾಗೂ ಕಾವೇರಿ ನದಿಯ ಸಂಗಮದ ಸಮೀಪದಲ್ಲಿ ನಿರ್ಮಿಸಿ, 67.16 ಟಿ.ಎಂ.ಸಿ ನೀರನ್ನು ಶೇಖರಿಸಲು ರೂ.9000.00 ಕೋಟಿ ಮೊತ್ತದ ಡಿ.ಪಿ.ಆರ್. ತಯಾರಿಸಿ ದಿನಾಂಕ:18-01-2019 ರಂದು ಕೇಂದ್ರ ಜಲ ಆಯೋಗಕ್ಕೆ ಸಲ್ಲಿಸಲಾಗಿದೆ.<br>**ಸದರಿ ಯೋಜನೆಗೆ ಬೇಕಾದ ತೀರುವಳಿಗಳು :-**<br>i. ಸದರಿ ವಿವರವಾದ ಯೋಜನಾ ವರದಿಯು ಕೇಂದ್ರ ಜಲ ಆಯೋಗದ ವಿವಿಧ ನಿರ್ದೇಶನಾಲಯಗಳ ತೀರುವಳಿ ಅಗತ್ಯವಿರುತ್ತದೆ.<br>ii. ಕೇಂದ್ರ ಜಲ ಆಯೋಗ, ನವದೆಹಲಿ ರವರು ಸದರಿ ಯೋಜನೆಯ ಕುರಿತು Cauvery Water Management Authority ರವರ ಅಭಿಪ್ರಾಯ ಕೋರಿದೆ;<br>iii. ಯೋಜನೆಗೆ ಅವಶ್ಯವಿರುವ Environmental Impact Assessment (EIA) & Environmental Management Plan (EMP) ವರದಿಗಳನ್ನು ತಯಾರಿಸಲು Terms of Reference (ToR) ಅರ್ಜಿಗೆ ಪರಿಸರ ಅರಣ್ಯ ಮತ್ತು ಹವಾಮಾನ ಬದಲಾವಣೆಯ ಸಚಿವಾಲಯದ (MoEF & CC) ಅನುಮೋದನೆ ನಿರೀಕ್ಷಿಸಲಾಗಿದೆ.<br>iv. ಪ್ರಸ್ತಾಪಿತ ಯೋಜನೆಗೆ ವನ್ಯಜೀವಿ, ಅರಣ್ಯ ಹಾಗೂ ಪರಿಸರದ ಶಾಸನಬದ್ಧ ತೀರುವಳಿಗಳ ಅವಶ್ಯವಿರುತ್ತದೆ.<br>v. ತಮಿಳುನಾಡು ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಿನಾಂಕ:30-11-2018 ರಂದು M.A. No.3127 of 2018 ಅನ್ನು ದಾಖಲಿಸಿದ್ದು, ನ್ಯಾಯಾಲಯದಲ್ಲಿ ಬಾಕಿ ಇರುತ್ತದೆ.<br>vi. ಮಾನ್ಯ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ, ಪ್ರಧಾನ ಪೀಠ, ನವದೆಹಲಿ, ರವರ ದಿನಾಂಕ:17-06-2021 ರ ಆದೇಶವನ್ನು ಪ್ರಶ್ನಿಸಿ ತಮಿಳುನಾಡು ರಾಜ್ಯವು ದಿನಾಂಕ:11-08-2021 ರಂದು ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸಿರುತ್ತದೆ. |

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| | | **ಸರ್ಕಾರದಿಂದ ಈ ಕೆಳಕಂಡ ಕ್ರಮ ಕೈಗೊಳ್ಳಲಾಗಿದೆ :**<br>• ಮಾನ್ಯ ಮುಖ್ಯಮಂತ್ರಿಗಳು, ಮಾನ್ಯ ಜಲಸಂಪನ್ಮೂಲ ಸಚಿವರು ಹಾಗೂ ಸರ್ಕಾರದ ಮುಖ್ಯ ಕಾರ್ಯದರ್ಶಿಯವರುಗಳಿಂದ ಮಾನ್ಯ ಕೇಂದ್ರ ಜಲ ಶಕ್ತಿ ಸಚಿವರು, ಮಾನ್ಯ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವರು ಹಾಗೂ ಕಾರ್ಯದರ್ಶಿಗಳು, ಕೇಂದ್ರ ಜಲ ಶಕ್ತಿ ಮಂತ್ರಾಲಯ, ಭಾರತ ಸರ್ಕಾರ ರವರಿಗೆ ಹಲವಾರು ಪತ್ರಗಳನ್ನು ಬರೆದು ಸದರಿ ಯೋಜನೆಗೆ ಅವಶ್ಯವಿರುವ ಕೇಂದ್ರದ ವಿವಿಧ ಇಲಾಖೆಗಳ ಅವಶ್ಯಕ ತೀರುವಳಿಗಳನ್ನು ತುರ್ತಾಗಿ ಒದಗಿಸಿಕೊಡುವಂತೆ ಕೋರಲಾಗಿದೆ.<br>• ಸಕ್ಷಮ ಪ್ರಾಧಿಕಾರಗಳ ಅನುಮೋದನೆಯನ್ನು ಪಡೆಯಲು ಅಗತ್ಯ ಕ್ರಮವಹಿಸಲಾಗುತ್ತಿದೆ.<br><br>2. <u>ಆಲಮಟ್ಟಿ ಯೋಜನೆ</u> :-<br>• ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪಿನ ಅನ್ವಯ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ಕ್ಕೆ 130 ಟಿ.ಎಂ.ಸಿ. ನೀರಿನ ಹಂಚಿಕೆ ಆಗಿದ್ದು, ಇದರಲ್ಲಿ ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹಣೆ ಮಟ್ಟವನ್ನು ಆರ್.ಎಲ್. 519.60 ಮೀ. ನಿಂದ ಆರ್.ಎಲ್. 524.256 ಮೀ.ರವರೆಗೆ ಎತ್ತರಿಸುವುದು ಒಳಗೊಂಡಿರುತ್ತದೆ.<br>• ಆಲಮಟ್ಟಿ ಜಲಾಶಯದ ಸಂಗ್ರಹಣೆ ಮಟ್ಟ ಎತ್ತರಿಸುವಿಕೆ ಹಾಗೂ ನೀರಿನ ಬಳಕೆ ಕೇಂದ್ರ ಸರ್ಕಾರದಿಂದ ಹೊರಡಿಸುವ ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪಿನ ಅಧಿಸೂಚನೆಗೆ ಒಳಪಟ್ಟಿರುತ್ತದೆ.<br>• ನ್ಯಾಯಾಧೀಕರಣ-2ರ ತೀರ್ಪಿನ ಕುರಿತಾಗಿ ಕರ್ನಾಟಕ, ತೆಲಂಗಾಣ ಮತ್ತು ಆಂಧ್ರ ಪ್ರದೇಶ ರಾಜ್ಯಗಳು ಸರ್ವೋಚ್ಚ ನ್ಯಾಯಾಲಯದಲ್ಲಿ ಸಲ್ಲಿಸಿರುವ ವಿಶೇಷ ಅನುಮತಿ ಅರ್ಜಿಗಳು ಇತ್ಯರ್ಥವಾಗಬೇಕಾಗಿರುತ್ತದೆ. ದಿನಾಂಕ:16-09-2011ರ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಲ್ಲಿ ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪನ್ನು ಗೆಜೆಟ್ ಪ್ರಕಟಣೆ ಮಾಡದಂತೆ ಕೇಂದ್ರ ಸರ್ಕಾರಕ್ಕೆ ಆದೇಶಿಸಲಾಗಿದೆ. ಸದರಿ ಸರ್ವೋಚ್ಚ ನ್ಯಾಯಾಲಯದ ತೀರ್ಪನ್ನು ಮಾರ್ಪಡಿಸುವಂತೆ ಮತ್ತು ಕೃಷ್ಣಾ ನ್ಯಾಯಾಧೀಕರಣ ತೀರ್ಪನ್ನು ಗೆಜೆಟ್ ಪ್ರಕಟಣೆ ಮಾಡಲು ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ಈಗಾಗಲೇ ರಾಜ್ಯ ಸರ್ಕಾರದಿಂದ ದಿನಾಂಕ:18.12.2019 ರಂದು ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಮಧ್ಯಕಾಲಿನ ಅರ್ಜಿಯನ್ನು ಸಲ್ಲಿಸಲಾಗಿರುತ್ತದೆ. ಇದಲ್ಲದೆ, ಕಣಿವೆ ರಾಜ್ಯಗಳು ಸಲ್ಲಿಸಿರುವ ಎಸ್.ಎಲ್.ಪಿ.ಗಳ ಇತ್ಯರ್ಥವನ್ನು ಕಾಯ್ದಿರಿಸಿ ಕಾವೇರಿ ಮತ್ತು ಮಹಾದಾಯಿ ನ್ಯಾಯಾಧೀಕರಣಗಳ ಅಂತಿಮ ತೀರ್ಪನ್ನು ಕೇಂದ್ರ ಸರ್ಕಾರವು ಗೆಜೆಟ್ ಪ್ರಕಟಣೆ ಮಾಡಿರುವಂತೆ ಕೃಷ್ಣಾ ನ್ಯಾಯಾಧೀಕರಣದ ತೀರ್ಪನ್ನು ಸಹ ಗೆಜೆಟ್ ಪ್ರಕಟಣೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಹಲವು ಬಾರಿ ಕೋರಲಾಗಿರುತ್ತದೆ.<br>• ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ಯೋಜನೆಯ ರೂ.51,148.94 ಕೋಟಿ ಪರಿಷ್ಕೃತ ಅಂದಾಜು ಮೊತ್ತಕ್ಕೆ |

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| | | ಸರ್ಕಾರವು ಆದೇಶ ದಿನಾಂಕ:09.10.2017 ರನ್ವಯ ಆಡಳಿತಾತ್ಮಕ ಅನುಮೋದನೆ ನೀಡಿರುತ್ತದೆ.<br>• ಕೃ.ಮೇ.ಯೋ ಹಂತ-3ರಡಿ 9 ಉಪ ಯೋಜನೆಗಳ ಮುಖ್ಯ ಸ್ಥಾವರಗಳ ನಿರ್ಮಾಣ, ಮುಖ್ಯ /ಶಾಖಾ ಕಾಲುವೆ ಮತ್ತು ವಿತರಣಾ ಕಾಲುವೆ ಜಾಲಗಳ ನಿರ್ಮಾಣ ಕಾಮಗಾರಿಗಳನ್ನು ಮುಂದುವರೆಸುತ್ತಾ ಆದ್ಯತೆಯ ಮೇರೆಗೆ ಕಾರ್ಯಗತಗೊಳಿಸಲಾಗುತ್ತಿದೆ.<br>• ಸಮಾನಾಂತರವಾಗಿ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರಡಿ ಭೂಸ್ವಾಧೀನಕ್ಕೆ ಒಳಪಡುವ ಒಟ್ಟಾರೆ 1.34 ಲಕ್ಷ ಎಕರೆ ಜಮೀನು ಭೂಸ್ವಾಧೀನಕ್ಕೆ ಹಾಗೂ ಮುಳುಗಡೆ ಹೊಂದುವ 20 ಗ್ರಾಮಗಳ ಮತ್ತು ಬಾಗಲಕೋಟೆ ಪಟ್ಟಣದ ಪುನರ್ ನಿರ್ಮಾಣವನ್ನು "ನ್ಯಾಯಬದ್ಧ ಮತ್ತು ಪಾರದರ್ಶಕ ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್ ನಿರ್ಮಾಣ ಕಾಯ್ದೆ 2013" ರನ್ವಯ ಕ್ರಮಕೈಗೊಳ್ಳಲಾಗುತ್ತಿದೆ. ಇದುವರೆಗೂ ಒಟ್ಟು 23,592 ಎಕರೆ ಜಮೀನು ಭೂಸ್ವಾಧೀನತೆಗೆ ಅವಾರ್ಡ್ ಮಾಡಲಾಗಿದೆ.<br>• ಯೋಜನೆಯ ಅನುಷ್ಠಾನಕ್ಕಾಗಿ ಪ್ರಾರಂಭದಿಂದ ಆಗಸ್ಟ್ 2021ರ ವರೆಗೆ ಒಟ್ಟು ರೂ.13,257.32 ಕೋಟಿ ಖರ್ಚು ಮಾಡಲಾಗಿರುತ್ತದೆ ಹಾಗೂ ಯೋಜನೆಯಡಿ ಇದುವರೆಗೂ ಒಟ್ಟು 87,344 ಹೆಕ್ಟೇರ್ ಅಚ್ಚುಕಟ್ಟು ಕ್ಷೇತ್ರದ ಔಟ್ ಲೆಟ್ ನೀರಾವರಿ ಸಾಮರ್ಥ್ಯ ಕಲ್ಪಿಸಲಾಗಿರುತ್ತದೆ.<br>• ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪು ಕೇಂದ್ರ ಸರ್ಕಾರದಿಂದ ಗೆಜೆಟ್ ಅಧಿಸೂಚನೆ ಹೊರಡಿಸಲು ಕೇಂದ್ರ ಸರ್ಕಾರದ ಜೊತೆಗೆ ಸಮನ್ವಯ ಸಾಧಿಸುತ್ತಿದ್ದು, ಅಧಿಸೂಚನೆ ಹೊರಡಿಸಲು ಎಲ್ಲಾ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ. |

***ಸಂಖ್ಯೆ:ಜಸಂಇ 140 ಎನ್‌ಎಲ್‌ಎ 2021***

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು